ದಿ: ೧೯.೦೮.೨೦೨೩ ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಿ ಮುಖ್ಯ ವಿಚಾರಣೆಗೆ ಒಳಪಡಿಸಲಾಯಿತು.

ಮುಖ್ಯ ವಿಚಾರಣೆ : ಅರ್ಜಿದಾರ ಪರವಾಗಿ ಶ್ರೀ ಎಂ.ಎಸ್ ವಕೀಲರಿಂದ.

ನನ್ನ ಮುಖ್ಯ ವಿಚಾರಣೆ ಬದಲಿಗೆ ಪ್ರಮಾಣ ಪತ್ರವನ್ನು ಸಲ್ಲಿಸಿರುತ್ತೇನೆ. ಅದರಲ್ಲಿ ಬರೆದಿರುವ ಎಲ್ಲ ಅಂಶಗಳು ಸತ್ಯವಾಗಿರುತ್ತವೆ. ತಿಳಿದುಕೊಂಡು ಸಹಿ ಮಾಡಿರುತ್ತೇನೆ.

ನಾನು ಮಾನ್ಯ ನ್ಯಾಯಾಲಯಕ್ಕೆ ಭಾವಚಿತ್ರಗಳನ್ನು ಹಾಜರುಪಡಿಸಿದ್ದು, ಅವುಗಳನ್ನು ನಿ.ಪಿ.೧ ರಿಂದ ೫ ಎಂದು, ಸಿ.ಡಿ.ಯನ್ನು ಹಾಜರುಪಡಿಸಿದ್ದು, ಅದನ್ನು ನಿ.ಪಿ.೬ ಮತ್ತು ೭ ಎಂದು, ಹಾಗೂ ದಾವಾ ಆಸ್ತಿ ಇತ್ತಿಚಿನ ಭಾವಚಿತ್ರಗಳನ್ನು ಹಾಜರುಪಡಿಸಿದ್ದು, ಅವುಗಳನ್ನು ನಿ.ಪಿ.೮ ರಿಂದ ೧೦ ಎಂದು, ಸಿ.ಡಿ.ಯನ್ನು ಹಾಜರುಪಡಿಸಿದ್ದು, ಅದನ್ನು ನಿ.ಪಿ.೧೧ ಮತ್ತು ೧೨ ಎಂದು, ಪ್ರಕರಣದ ವಾದಿಯು ನನಗೆ ಬರೆದುಕೊಟ್ಟಿರುವ ವಿಶೇಷ ಮುಕ್ತಿಯಾರ ಪತ್ರವನ್ನು ಹಾಜರುಪಡಿಸಿದ್ದು, ಅದನ್ನು ನಿ.ಪಿ.೧೩ ಎಂದು ಗುರ್ತಿಸಲಾಯಿತು.

( ಈ ಹಂತದಲ್ಲಿ ಅರ್ಜಿದಾರ ಪರವಾಗಿ ಶ್ರೀ ಎಂ.ಎಸ್. ವಕೀಲರು ಮುಂದುವರೆದ ಮುಖ್ಯ ವಿಚಾರಣೆಗೆ ಸಮಯ ಕೋರಿದ್ದು, ಸಮಯ ನೀಡಿ ಮುಂದೂಡಲಾಯಿತು.)

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಗಣಕಯಂತ್ರದ ಮೇಲೆ ಗಣಕೀಕರಿಸಿದೆ)

**ಓ.ಹೇ.ಕೇ.ಸ.ಇದೆ**

**ಪ್ರಧಾನ ಸಿವಿಲ್ ಜಡ್ಜ್ ಮತ್ತು ಜೆ.ಎಂ.ಎಫ್.ಸಿ**
**ಹೊಸಕೋಟೆ.**